ಲೋಕೋಪಯೋಗಿ ಇಲಾಖೆಗೆ ಪ್ರಸ್ತಾವನೆಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಈ ಕಾಮಗಾರಿಗಳಿಗೆ ಸರ್ಕಾರವು ಅನುದಾನ ಬಿಡುಗಡೆ ಮಾಡಲು ಕ್ರಮ ಜರುಗಿಸುವುದು; ಕ್ರಮ ಜರುಗಿಸಿದ್ದಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಕುಣಿಗಲ್ ಪಟ್ಟಣದಲ್ಲಿರುವ ಪ್ರಥಮ ದರ್ಜೆ ಕಾಲೇಜಿಗೆ ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸಲು ಅನುದಾನ ಬಿಡುಗಡೆಗಾಗಿ ಉಪಯೋಗಿತ ಇಲಾಖೆಗೆ ಪ್ರಸ್ತಾವನೆಯನ್ನು ಕಳುಹಿಸಲಾಗಿದ್ದು, ಅವರಿಂದ ಅನುದಾನ ಬಿಡುಗಡೆಯಾದ ಕೂಡಲೇ ಕಾಮಗಾರಿಗಳನ್ನು ಕೈಗೊಳ್ಳ ಲಾಗುವುದು.

ಆ) ಅನುದಾನ ಬಿಡುಗಡೆಯಾದ ನಂತರ ನಿಯಮಾನುಸಾರ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.

ಇ) ಮೇಲ್ಕಂಡಂತೆ ಅನುದಾನದ ಬಿಡುಗಡೆಯ ಪ್ರಸ್ತಾವನೆ ಸಲ್ಲಿಸಿರುವುದರಿಂದ ಅನುದಾನ ಬಿಡುಗಡೆಯ ನಿರೀಕ್ಷೆಯಲ್ಲಿದೆ.

ರಸ್ತೆಗಳ ಅಭಿವೃದ್ಧಿ

549 (109) ಶ್ರೀ ರಾಮಸ್ವಾಮಿಗೌಡ ಬಿ.ಬಿ. (ಕುಣಿಗಲ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಣಿಗಲ್ ತಾಲ್ಲೂಕಿನ ವ್ಯಾಪ್ತಿಯಲ್ಲಿ ಲೋಕೋಪಯೋಗಿ ರಸ್ತೆಗಳ ಅಭಿವೃದ್ಧಿ, ಮೇಲ್ದರ್ಜೆಗೇರಿಸುವಿಕೆ, ಅಗಲೀಕರಣ, ನಿರ್ವಹಣೆ ಇತ್ಯಾದಿಗಾಗಿ ಪ್ರಸ್ತುತ ಸಾಲಿನಲ್ಲಿ ಸ್ಥಳೀಯ ಅಭಿಯಂತರರು ರೂ.20.00 ಕೋಟಿಗೂ ಹೆಚ್ಚು ಅನುದಾನಗಳ ಬೇಡಿಕೆಗೆ ಪ್ರಸ್ತಾವಗಳನ್ನು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಕೋರಿರುವ ಅನುದಾನಗಳನ್ನು ಈ ಸಾಲಿನಲ್ಲಿಯೇ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಬಂದಿರುವುದಿಲ್ಲ.

ಆ) ಕುಣಿಗಲ್ ತಾಲ್ಲೂಕಿನ ರಸ್ತೆಗಳ ಅಭಿವೃದ್ಧಿಗಾಗಿ ಪ್ರಸಕ್ತ ಸಾಲಿನಲ್ಲಿ ವಿವಿಧ ಲೆಕ್ಕಶೀರ್ಷಿಕೆ ಯೋಜನೆ ಅಡಿಯಲ್ಲಿ ರೂ. 1067.67 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ.

ಸದರಿ ರಸ್ತೆಗಳ ನಿರ್ವಹಣೆಗಾಗಿ ಅನುಕ್ರಮವಾಗಿ ರಾಜ್ಯ ಹೆದ್ದಾರಿ ಗಳಿಗೆ ರೂ. 44.24 ಲಕ್ಷಗಳ ಅನುದಾನವನ್ನು ಹಾಗೂ ಜಿಲ್ಲಾ ಮುಖ್ಯ ರಸ್ತೆಗಳಿಗೆ ರೂ.43.18 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ. ಹಾಗೂ ಈ ನಿರ್ವಹಣಾ ಅನುದಾನದಡಿ 93.06 ಕಿಮೀ ಉದ್ದದ ರಾಜ್ಯ ಹೆದ್ದಾರಿಗಳನ್ನು ಮತ್ತು 253.95 ಕಿಮೀ ಉದ್ದದ ಜಿಲ್ಲಾ ಮುಖ್ಯ ರಸ್ತೆಗಳನ್ನು ನಿರ್ವಹಣೆ ಮಾಡಲಾಗಿದೆ.

ಸಹಕಾರ ಗ್ರಾಹಕರ ಮಹಾ ಮಂಡಳಿಯ ಶಾಖೆಗಳು

550 (635) ಶ್ರೀ ಎ.ಬಿ.ರಮೇಶ ಬಂಡಿಸಿದ್ದೇಗೌಡ (ಶ್ರೀರಂಗಪಟ್ಟಣ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳಿಯ (ಕೆ.ಸಿ.ಸಿ.ಎಫ್) ವತಿಯಿಂದ ಕಾರ್ಯ ನಿರ್ವಹಿಸುತ್ತಿರುವ ಶಾಖೆಗಳು ಎಷ್ಟು;

ಆ) ಈ ಶಾಖೆಗಳ ಪೈಕಿ ಎಷ್ಟು ಲಾಭದಲ್ಲಿವೆ ಹಾಗೂ ಎಷ್ಟು ನಷ್ಟದಲ್ಲಿವೆ (ಪೂರ್ಣ ಮಾಹಿತಿ ನೀಡುವುದು);

ಇ) ಕೆಂಪೇಗೌಡ ರಸ್ತೆಯಲ್ಲಿ ಕೆ.ಸಿ.ಸಿ.ಎಫ್.ನ ಶಾಖೆ ಕಾರ್ಯನಿರ್ವ ಹಿಸುತ್ತಿರುವುದೇ; ಇದರ ಪ್ರಧಾನ ವ್ಯವಸ್ಥಾಪಕರು ಯಾವ ದರ್ಜೆಯ ಹಾಗೂ ಯಾವ ಇಲಾಖೆಯ ಅಧಿಕಾರಿಯಾಗಿರುತ್ತಾರೆ.

ಈ) ಈ ಅಧಿಕಾರಿ ಬೇರೆ ಯಾವುದಾದರೂ ಹುದ್ದೆಯಲ್ಲಿ ಸಮಾನಾಂತರವಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆಯೇ; ಹಾಗಿದ್ದಲ್ಲಿ ಯಾವ ದಿನಾಂಕದಿಂದ ಈ ಹುದ್ದೆಯನ್ನು ನಿರ್ವಹಿಸುತ್ತಿರುತ್ತಾರೆ?

ಶ್ರೀ ಲಕ್ಷ್ಮಣ ಸವದಿ (ಸಹಕಾರ ಸಚಿವರು) :

ಅ) 19.

ಆ) ಲಾಭದಲ್ಲಿರುವ ಶಾಖೆಗಳು– 18
ನಷ್ಟದಲ್ಲಿರುವ ಶಾಖೆಗಳು– 01
(ಮಾಹಿತಿಯನ್ನು ಲಗತ್ತಿಸಿದೆ)